**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 91/2020**

**ಚಾ.ಸಾಃ 24, ಫ್ರಾ.ಸಾಃ 12**

| | |
|---|---|
| ಸಾಕ್ಷಿದಾರನ ಹೆಸರು | ನಾರಾಯಣ ಗೌಡ |
| ತಂದೆಯ ಹೆಸರು | ಗೋವಿಂದ ಗೌಡ |
| ವಯಸ್ಸು | 61 ವರ್ಷಗಳು |
| ಉದ್ಯೋಗ | ನಿವೃತ್ತ ಸಹಾಯಕ ಆರಕ್ಷಕ ನಿರೀಕ್ಷಕರು, |
| ವಾಸ್ತವ್ಯ | ಕುಮಟಾ |

**ಸಾಕ್ಷಿಯನ್ನು ದಿನಾಂಕಃ 06-03-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಮಾರ್ಚ-2017 ರಿಂದ ಮೇ-2022 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ-ನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ **30-05-2019** ರಂದು ಮಧ್ಯಾಹ್ನ **12-00** ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ-1 ರವರು ಠಾಣಾಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.158/2019 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-5 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-13 ಎಂದು, ಸಾಕ್ಷಿ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

ನಂತರ ಕೇಸಿನ ಕಡತವನ್ನು ಚಾಸಾ-**25** ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ**

ಪಿರ್ಯಾದುದಾರರು ಠಾಣೆಗೆ ಹಾಜರಾಗಿ ದೂರು ನೀಡಿಲ್ಲ ಎಂದರೆ ಸರಿಯಲ್ಲ. ಪಿರ್ಯಾದಿಗೆ ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ. **ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**